# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಕೇಂದ್ರ ಪುರಸ್ಕೃತ ಯೋಜನೆ – ನೀಲಿಕ್ರಾಂತಿ : ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ 2017–18ನೇ ಸಾಲಿನಲ್ಲಿ ಆಡಳಿತಾತ್ಮಕ ಮಂಜೂರಾತಿ ಪಡೆದ ಯೋಜನೆಗಳಿಗೆ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:– 1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ. 27035/19/2015 – ಎಫ್‌ವೈ(IV), ದಿನಾಂಕ: 11–05–2017.

2) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ ಜೆ.1804111/1/2017 – ಎಫ್‌ವೈ ದಿನಾಂಕ: 11–05–2017.

3) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ. 27035/19/2015 – ಎಫ್‌ವೈ (IV), ದಿನಾಂಕ:28–9–2017.

4) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ. 31012–6/2017 –ಎಫ್‌ವೈ (ಪಿ&ಎಮ್) ದಿನಾಂಕ: 28–9–2017.

5) ಜಮಾ ದೃಢೀಕರಣ ಪತ್ರ ಸಂಖ್ಯೆ: ಎಫ್‌ಡಿ/1/ಬಿಜಿಎಲ್/2017, ದಿನಾಂಕ: 07–10–2017.

6) ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ/187/ಬಿಆರ್‌ಎಸ್/2017, ದಿನಾಂಕ: 07–02–2018.

7) ಪತ್ರ ಸಂಖ್ಯೆ: ಮೀನಿ/23/ಎಫ್‌ವೈಪಿ (2)/2017, ದಿನಾಂಕ: 22–12–2017 ಮತ್ತು 20–02–2018.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಪತ್ರದಲ್ಲಿ, ಕೇಂದ್ರ ಸರ್ಕಾರವು ಕೇಂದ್ರ ಪುರಸ್ಕೃತ ನೀಲಿಕ್ರಾಂತಿ – ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (Blue Revolution: Integrated Development and Management of Fisheries) ಯೋಜನೆಯನ್ನು 2017–18ನೇ ಸಾಲಿಗೆ ಮುಂದುವರಿಸಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ, ಮೀನುಗಾರಿಕೆ ಇಲಾಖೆ, ಕರ್ನಾಟಕಕ್ಕೆ ರೂ.1500.00 ಲಕ್ಷಗಳ ಅನುದಾನದ ಅವಕಾಶ ಕಲ್ಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ, ಕೇಂದ್ರ ಸರ್ಕಾರವು ಸದರಿ ಯೋಜನೆಯ ಸಹಾಯಧನ ಪ್ರಮಾಣ ಹಾಗೂ ಸಹಾಯಧನ ಹಂಚಿಕೆಯನ್ನು ಪರಿಷ್ಕರಿಸಿದೆ. ಪರಿಷ್ಕೃತ ಆಡಳಿತಾತ್ಮಕ ಮಂಜೂರಾತಿಯ ಪ್ರಕಾರ ಎಲ್ಲಾ ಫಲಾನುಭವಿ ಆಧಾರಿತ ಯೋಜನೆ / ಕಾರ್ಯಕ್ರಮಗಳ ಸಾಮಾನ್ಯ ವರ್ಗದವರಿಗೆ ಸಹಾಯಧನ (ಕೇಂದ್ರ+ರಾಜ್ಯ) ಶೇ.40 ರಷ್ಟಿಗೆ

ಹಾಗೂ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ, ಮಹಿಳೆಯರಿಗೆ ಹಾಗೂ ಮಹಿಳೆಯರ ಸಹಕಾರ ಸಂಸ್ಥೆಗಳಿಗೆ ಶೇ.60 ರಷ್ಟಿಗೆ ಮಿತಿಗೊಳಿಸಲಾಗಿದೆ. ಸಹಾಯಧನದ ಮೊತ್ತದಲ್ಲಿ ಕೇಂದ್ರ ಶೇ.60 ರಷ್ಟು ಮತ್ತು ರಾಜ್ಯ ಶೇ.40 ರಷ್ಟು ಭರಿಸಬೇಕಾಗಿದೆ. ಈ ಪರಿಷ್ಕರಣೆಯನ್ನು 2017-18 ನೇ ಸಾಲಿನಿಂದ ಜಾರಿಗೆ ತರಲಾಗಿದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ, ಅನುಬಂಧ-1 ರಂತೆ ಕೆಲವು ಘಟಕಗಳಿಗೆ ರೂ.826.26 ಲಕ್ಷಗಳ ಯೋಜನಾ ವೆಚ್ಚಕ್ಕೆ ಮಂಜೂರಾತಿ ನೀಡಲಾಗಿದೆ. ಸಹಾಯಧನ ಮೊತ್ತ ರೂ.330.00 ಲಕ್ಷಗಳಿಗೆ ಮಂಜೂರಾತಿ ನೀಡಲಾಗಿದೆ. ಸಹಾಯಧನದಲ್ಲಿ ಕೇಂದ್ರದ ಪಾಲು ರೂ.198.00 ಲಕ್ಷ ಹಾಗೂ ರಾಜ್ಯದ ಪಾಲು ರೂ.132.00 ಲಕ್ಷ ಗಳಾಗಿರುತ್ತದೆ. ಈ ಮೊತ್ತದಲ್ಲಿ ಮೊದಲನೇ ಕಂತಾಗಿ ರೂ.123.94 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಜಮಾ ದೃಢೀಕರಣದಲ್ಲಿ, ಸದರಿ ಮೊತ್ತ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಜಮೆ ಆಗಿರುವ ಬಗ್ಗೆ ಆರ್ಥಿಕ ಇಲಾಖೆಯು ದೃಢೀಕರಿಸಿದೆ.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ಆದೇಶದಲ್ಲಿ, ಸದರಿ ಯೋಜನೆಗೆ 2017-18ನೇ ಸಾಲಿನಲ್ಲಿ ಕೇಂದ್ರದಿಂದ ಬಿಡುಗಡೆಯಾದ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನ ಸೇರಿಸಿ ಬಿಡುಗಡೆ ಮಾಡಲು ಕೊರತೆ ಉಂಟಾಗಿರುವ ರೂ.1.67 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2405-00-101-0-58-ನೀಲಿಕ್ರಾಂತಿ/ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ-106-ಸಹಾಯಧನ ರಡಿ ಅನುಬಂಧದಂತೆ ಹೆಚ್ಚುವರಿಯಾಗಿ ಮಂಜೂರು ಮಾಡಿದೆ. ಈ ಹೆಚ್ಚುವರಿ ಅನುದಾನವನ್ನು 2017-18ನೇ ಸಾಲಿನ ಪೂರಕ ಅಂದಾಜುಗಳು 3ನೇ ಕಂತಿನಲ್ಲಿ ಒದಗಿಸುವ ಮೂಲಕ ಕ್ರಮಬದ್ಧಗೊಳಿಸಲಾಗುವುದು.

ಮೇಲೆ ಕ್ರಮ ಸಂಖ್ಯೆ (7)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, 2017-18 ನೇ ಸಾಲಿನಲ್ಲಿ ಸದರಿ ಯೋಜನೆಯನ್ನು ಕೇಂದ್ರ ವಲಯ ಯೋಜನೆಯಾಗಿ ಗುರುತಿಸಿ ಕೇಂದ್ರದ ಪಾಲಿನ ಅನುದಾನವನ್ನು ಮಾತ್ರ ಒದಗಿಸಲಾಗಿರುತ್ತದೆ. ಕೇಂದ್ರ ಸರ್ಕಾರವು ಯೋಜನೆ ಪರಿಷ್ಕರಿಸಿರುವುದರಿಂದ, ರಾಜ್ಯದ ಪಾಲು ರೂ.132.00 ಲಕ್ಷಗಳನ್ನು ಒದಗಿಸಲು ಕೋರಲಾಗಿ, ಸರ್ಕಾರವು ಪ್ರಸ್ತುತ ಸದರಿ ಲೆಕ್ಕ ಶೀರ್ಷಿಕೆಯಡಿ ಲಭ್ಯವಿರುವ ಅನುದಾನ ರೂ.204.90 ಲಕ್ಷಗಳು ಹಾಗೂ ಹೆಚ್ಚುವರಿ ಅನುದಾನ ರೂ.1.67 ಲಕ್ಷಗಳನ್ನು ಒದಗಿಸಿ ಒಟ್ಟು ರೂ.206.57 ಗಳನ್ನು ಒದಗಿಸಿ ಉಪಯೋಗಿಸಲು ಮಂಜೂರು ಮಾಡಲಾಗಿದೆ. ಹೀಗೆ ಮಂಜೂರು ಮಾಡಿದ ಮೊತ್ತವನ್ನು ಕೇಂದ್ರ ಸರ್ಕಾರ ಅನುಮೋದಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಪಾಲು ರೂ.123.94 ಲಕ್ಷ ಹಾಗೂ ರಾಜ್ಯದ ಪಾಲು ರೂ.82.625 ಲಕ್ಷ ಒಟ್ಟು ರೂ.206.57 ಲಕ್ಷಗಳನ್ನು ಬಿಡುಗಡೆಗೊಳಿಸಲು ಕೋರಿರುತ್ತಾರೆ.

-3-

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 166 ಮೀಇಯೋ 2017, ಬೆಂಗಳೂರು ದಿನಾಂಕ: 12-03-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿಗೆ ಕೇಂದ್ರ ಪುರಸ್ಕೃತ ನೀಲಿಕ್ರಾಂತಿ / ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಗೆ ಕೇಂದ್ರ ಸರ್ಕಾರದ ಮೊದಲನೇ ಕಂತು ರೂ.123.94 ಲಕ್ಷಗಳಿಗೆ ಅನುಗುಣವಾಗಿ ರಾಜ್ಯದ ಪಾಲು ರೂ.82.62 ಲಕ್ಷಗಳನ್ನು ಸೇರಿ ಒಟ್ಟು ರೂ.206.56 ಲಕ್ಷ (ಇನ್ನೂರ ಆರು ಲಕ್ಷದ ಐವತ್ತಾರು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆ ಮಾಡಲಾಗಿದೆ.

ಸದರಿ ಮೊತ್ತವನ್ನು 2017-18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2405-ಮೀನುಗಾರಿಕೆ-00-101-ಒಳನಾಡು ಮೀನುಗಾರಿಕೆ-0-58-ನೀಲಿಕ್ರಾಂತಿ-ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ-106-ಸಹಾಯಧನಯಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/50/ವೆಚ್ಚ-4/2018, ದಿನಾಂಕ: 12-02-2018 ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

12/3/18

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

13/03/18

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ- ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
8) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ- ಕಂಪ್ಯೂಡಿಯಂ.